# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2405 |
| ಸದಸ್ಯರ ಹೆಸರು | : | ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 27.03.2026. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿ ಸಂಸ್ಥೆಗಳ ಅವಧಿ ಮುಗಿದು ಎಷ್ಟು ಕಾಲ ಕಳೆದಿದೆ; ಅವಧಿ ಮುಗಿದಿದ್ದರೂ ಸರ್ಕಾರವು ಮರು ಚುನಾವಣೆಗಳನ್ನು ನಡೆಸದೇ ಇರುವುದಕ್ಕೆ ಕಾರಣಗಳೇನು; ಇದರ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು; | **<u>ಗ್ರಾಮ ಪಂಚಾಯತಿಗಳ ಚುನಾವಣೆ.</u>**<br><br>1) ರಾಜ್ಯದ ಗ್ರಾಮ ಪಂಚಾಯತಿಗಳಿಗೆ ಡಿಸೆಂಬರ್ 2020 ರಲ್ಲಿ ಸದಸ್ಯ ಸ್ಥಾನಗಳಿಗೆ ಚುನಾವಣೆ ನಡೆಸಲಾಗಿರುತ್ತದೆ. ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಹುದ್ದೆಗಳಿಗೆ ಜನವರಿ-ಫೆಬ್ರುವರಿ 2021 ರಲ್ಲಿ ಚುನಾವಣೆ ನಡೆಸಿ ಆಯ್ಕೆ ಮಾಡಲಾಗಿದ್ದು, ಈ ಅವಧಿಯು ಜನವರಿ- ಫೆಬ್ರುವರಿ-ಮಾರ್ಚ್ 2026 ರವರೆಗೆ ಇರುತ್ತದೆ.<br><br>2) ಸರ್ಕಾರದ ಪತ್ರ ಸಂಖ್ಯೆ: RDPR 486 GPA 2025, ದಿನಾಂಕ:28-01-2026 ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರಡಿಯಲ್ಲಿ ಗ್ರಾಮ ಪಂಚಾಯತಿಗಳಿಗೆ 2026-31 ನೇ ಸಾಲಿನ ಗ್ರಾಮ ಪಂಚಾಯತಿಯ ಸಾರ್ವತ್ರಿಕ ಚುನಾವಣೆ ನಡೆಸಲು ಬೇಕಾಗಿರುವ ಎಲ್ಲಾ ಅಗತ್ಯ ಪೂರ್ವ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ.<br><br>**<u>ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿ ಚುನಾವಣೆ.</u>**<br><br>1) ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯಿತಿಗಳ ಅವಧಿಯು ಜೂನ್ 2021ಕ್ಕೆ ಮುಕ್ತಾಯಗೊಂಡಿರುತ್ತದೆ. ಅವಧಿಯು ಮುಗಿದ ನಂತರ ಚುನಾವಣೆಯನ್ನು ನಡೆಸುವ ಸಿದ್ಧತೆಯಲ್ಲಿದ್ದಾಗ ರಾಜ್ಯದಲ್ಲಿ ಕೋವಿಡ್ ಸಾಂಕ್ರಾಮಿಕ ರೋಗ ಹಿನ್ನೆಲೆಯಲ್ಲಿ ಚುನಾವಣೆ ನಡೆಸಲು ಸಾಧ್ಯವಾಗಲಿಲ್ಲ.<br><br>2) 2021 ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ಕ್ಕೆ ತಿದ್ದುಪಡಿ ತಂದು ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವನ್ನು ರಚಿಸಲಾಗಿತ್ತು. ಆಯೋಗವು ನೀಡಿದ ಶಿಫಾರಸ್ಸಿನಂತೆ ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿಯ ಸೀಮಾ ಗಡಿಯನ್ನು ಗುರುತಿಸಿ ಅಧಿಸೂಚಿಸಲಾಗಿತ್ತು.<br><br>3) ಕೆಲವು ಗ್ರಾಮ ಪಂಚಾಯತಿಗಳು ಪಟ್ಟಣ ಪಂಚಾಯತಿ / ಪುರಸಭೆ/ನಗರ ಸಭೆಗಳಾಗಿ ಪರಿವರ್ತನೆಯಾಗಿರುವುದರಿಂದ, ಸಂಬಂಧಿಸಿದ ಜಿಲ್ಲಾ ಪಂಚಾಯತಿ ಹಾಗೂ ತಾಲ್ಲೂಕು ಪಂಚಾಯತಿಗಳ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳ ವ್ಯಾಪ್ತಿಯಿಂದ ಕೈ ಬಿಡಲು ಅಧಿಸೂಚನೆ ಹೊರಡಿಸಿ, ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿಗಳ ಚುನಾವಣಾ ಕ್ಷೇತ್ರಗಳ |

| | | |
|---|---|---|
| | | ಸೀಮಾ/ಗಡಿಗಳನ್ನು ನಿಗಧಿ ಮಾಡಲಾಗಿದೆ.<br><br>4) ನಗರಾಭಿವೃದ್ಧಿ ಇಲಾಖೆಯು ಡಿಸೆಂಬರ್-2025 ರಲ್ಲಿ ಕೆಲವು ಗ್ರಾಮ ಪಂಚಾಯತಿಗಳನ್ನು ಪಟ್ಟಣ ಪಂಚಾಯತಿ / ಪುರಸಭೆ / ನಗರ ಸಭೆಗಳಾಗಿ ಪರಿವರ್ತನೆ ಮಾಡಿದ್ದು, ಸಂಬಂಧಿಸಿದ ಜಿಲ್ಲಾ ಪಂಚಾಯತಿ ಹಾಗೂ ತಾಲ್ಲೂಕು ಪಂಚಾಯತಿಗಳ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳ ವ್ಯಾಪ್ತಿಯಿಂದ ಕೈ ಬಿಡಲು ಅಧಿಸೂಚನೆ ಹೊರಡಿಸಿ, ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿಗಳ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿಗಳನ್ನು ನಿಗಧಿ ಮಾಡಲಾಗಿದೆ.<br><br>5) ಕಂದಾಯ ಇಲಾಖೆಯು ತಾಲ್ಲೂಕುಗಳ ಗ್ರಾಮಗಳನ್ನು ತಾಲ್ಲೂಕಿನಿಂದ ತಾಲ್ಲೂಕಿಗೆ ವಿಂಗಡಣೆ ಮಾಡಿದ್ದು, ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿ ಕ್ಷೇತ್ರಗಳಿಗೆ ಸೀಮಾ/ಗಡಿಗಳನ್ನು ನಿಗಧಿ ಮಾಡುವ ಪ್ರಕ್ರಿಯೆಯು ಚಾಲ್ತಿಯಲ್ಲಿದ್ದು, ಪ್ರಕ್ರಿಯೆ ಪೂರ್ಣಗೊಂಡ ನಂತರ ಚುನಾವಣೆ ಪ್ರಕ್ರಿಯೆ ಕೈಗೊಳ್ಳಲಾಗುವುದು. |
| (ಆ) | ಅವಧಿ ಮುಗಿದ ತ್ರಿಸ್ತರ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಕ್ಷೇತ್ರ ಪುನರ್ ವಿಂಗಡಣೆ (Delimitation) ಪ್ರಕ್ರಿಯೆ ಕೈಗೊಳ್ಳಲಾಗಿದೆಯೇ;<br>ಕೈಗೊಳ್ಳಲಾಗಿದ್ದರೆ, ಅದರ ಪ್ರಸ್ತುತ ಸ್ಥಿತಿ ಏನು; ಕ್ಷೇತ್ರ ಪುನರ್‌ವಿಂಗಡಣೆ ಪೂರ್ಣಗೊಂಡಿದೆಯೇ ಮತ್ತು ಈ ಸಂಸ್ಥೆಗಳಿಗೆ ಚುನಾವಣೆಗಳನ್ನು ಯಾವಾಗ ನಡೆಸುವ ಯೋಜನೆ ಸರ್ಕಾರದ ಮುಂದಿದೆ; (ಸಂಪೂರ್ಣ ವಿವರ ನೀಡುವುದು) | ನಗರ ಸ್ಥಳೀಯ ಸಂಸ್ಥೆಗಳಾಗಿ ಪರಿವರ್ತನೆಯಾಗಿರುವುದರಿಂದ ಮತ್ತು ತಾಲ್ಲೂಕು ಗಡಿಗಳ ಬದಲಾವಣೆಗಳಿಂದ ಗ್ರಾಮ ಪಂಚಾಯಿತಿಯ ಸೀಮಾ/ಗಡಿಗಳು ವ್ಯತ್ಯಾಸವಾಗಿರುವ ಗ್ರಾಮ ಪಂಚಾಯಿತಿಗಳಿಗೆ ಹೊಸದಾಗಿ ಸದಸ್ಯ ಸ್ಥಾನ ನಿಗದಿಪಡಿಸಲು ಮತ್ತು ಕ್ಷೇತ್ರ ವ್ಯಾಪ್ತಿಯನ್ನು ನಿರ್ಧರಿಸಲು ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಲು ಸುತ್ತೋಲೆಯನ್ನು ಹೊರಡಿಸಲಾಗುತ್ತಿದೆ.<br><br>ರಾಜ್ಯದ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿಗಳ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿಗಳನ್ನು ನಿಗಧಿ ಮಾಡುವ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ತದನಂತರ ಚುನಾವಣೆ ನಡೆಸುವ ಪ್ರಕ್ರಿಯೆ ಕೈಗೊಳ್ಳಲಾಗುವುದು. |
| (ಇ) | ಚುನಾವಣೆ ವಿಳಂಬವಾಗಿರುವ ಅವಧಿಯಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳ ಆಡಳಿತವನ್ನು ಯಾರು ನಿರ್ವಹಿಸುತ್ತಿದ್ದಾರೆ; ಆಡಳಿತದ ಪಾರದರ್ಶಕತೆ ಮತ್ತು ಜವಾಬ್ದಾರಿತ್ವವನ್ನು ಖಚಿತಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | 1) ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿ ಹಾಗೂ ತಾಲ್ಲೂಕು ಪಂಚಾಯತಿಗಳಿಗೆ ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪಂರಾ 212 ಜಿಪಸ 2021, ದಿನಾಂಕ:26.04.2021ರಲ್ಲಿ ಆಡಳಿತ ಅಧಿಕಾರಿಯನ್ನು ನೇಮಿಸಲಾಗಿದ್ದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 239ರಲ್ಲಿನ ಉಪಬಂಧದನ್ವಯ ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿಗಳ ಆಡಳಿತಾಧಿಕಾರಿಗಳು ಎಲ್ಲಾ ಪ್ರಕಾರ್ಯಗಳು ಮತ್ತು ಜವಾಬ್ದಾರಿಗಳನ್ನು ನಿರ್ವಹಿಸಲು ಅಧಿಕಾರ ಹೊಂದಿರುತ್ತಾರೆ.<br><br>**2)** ಅಧಿನಿಯಮದ ಪ್ರಕರಣ 8 ರನ್ವಯ ಗ್ರಾಮ ಪಂಚಾಯಿತಿಗಳ ಅವಧಿ ಮುಕ್ತಾಯಗೊಂಡ ನಂತರ ಆಡಳಿತಾಧಿಕಾರಿಗಳನ್ನು ನೇಮಿಸಿ ಅಧಿಸೂಚಿಸುವಂತೆ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 1003 ಗ್ರಾಪಂಅ 2025, ದಿನಾಂಕ:16.01.2026ರಂದು ನಿರ್ದೇಶನ ನೀಡಲಾಗಿದೆ. ಅದರಂತೆ ನೇಮಕಗೊಂಡ ಆಡಳಿತಾಧಿಕಾರಿಗಳು ಗ್ರಾಮ ಪಂಚಾಯತಿಯ ಎಲ್ಲಾ ಅಧಿಕಾರಿಗಳನ್ನು ಮತ್ತು ಕರ್ತವ್ಯಗಳನ್ನು ನಿರ್ವಹಿಸುತ್ತಾರೆ. |

| | | |
|---|---|---|
| (ಈ) | ಮುಂದಿನ ಚುನಾವಣೆಗಳು ನಡೆಯುವವರೆಗೆ ಅವಧಿ ಮುಗಿದ ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿ ಸದಸ್ಯರನ್ನು (ಸದಸ್ಯರು/ ಸದಸ್ಯೆಯರು) ತಾತ್ಕಾಲಿಕವಾಗಿ ಮುಂದುವರೆಸುವ ಬಗ್ಗೆ ಸರ್ಕಾರ ಪರಿಗಣನೆ ನಡೆಸಿದೆಯೇ; ಇದ್ದರೆ, ಅದರ ಕುರಿತು ಸರ್ಕಾರದ ನಿರ್ಧಾರ ಮತ್ತು ಕಾನೂನುಬದ್ಧ ವ್ಯವಸ್ಥೆಗಳ ಮಾಹಿತಿ ನೀಡುವುದು? | ಭಾರತ ಸಂವಿಧಾನದ ಅನುಚ್ಛೇದ 243ಇ ಮತ್ತು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣ **41**, ಪ್ರಕರಣ 134 ಮತ್ತು ಪ್ರಕರಣ 173 ರನ್ವಯ, ಕ್ರಮವಾಗಿ ಗ್ರಾಮ, ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿಗಳಿಗೆ ಚುನಾಯಿತರಾಗಿರುವ ಸದಸ್ಯರ ಅವಧಿಯು 05 ವರ್ಷಗಳಾಗಿದ್ದು, ಈ ಅವಧಿಯು ಮುಕ್ತಾಯಗೊಂಡ ನಂತರ, ಅವರುಗಳನ್ನೇ ಮುಂದಿನ ಚುನಾವಣೆವರೆಗೆ ತಾತ್ಕಾಲಿಕವಾಗಿ ಮುಂದುವರೆಸಲು ಅವಕಾಶವಿರುವುದಿಲ್ಲ. |

ಸಂಖ್ಯೆ: ಗ್ರಾಅಪ 340 ಗ್ರಾಪಂಅ 2026

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.